**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 103/2024**

**ಚಾ.ಸಾ - 7**
**ಪ್ರಾ.ಸಾ - 2**

**ಸಾಕ್ಷಿಗೆ ದಿನಾಂಕ 03-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಭೀಮಣ್ಣ |
| ತಂದೆಯ ಹೆಸರು | ಃ | ಸಾಯಬಣ್ಣ |
| ವಯಸ್ಸು | ಃ | 58 ವರ್ಷ |
| ಉದ್ಯೋಗ | ಃ | ಕಂಟ್ರೋಲರ್ , ಜೇವರ್ಗಿ ಬಸ್ ನಿಲ್ದಾಣ |
| ವಾಸಸ್ಥಳ | ಃ | ಜೇವರ್ಗಿ |

**ಮುಖ್ಯವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಜೇವರ್ಗಿ ಬಸ್ ಡಿಪೊದಲ್ಲಿ 2003 ರಿಂದ ಇಲ್ಲಿಯವರೆಗೆ ಕಂಟ್ರೋಲರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ಚಾಸಾ-1 ಮತ್ತು 8 ನನಗೆ ಗೊತ್ತು. ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಜಪ್ತಿ ಪಂಚನಾಮೆಯನ್ನು ನಿಪಿ-7 ಎಂದು ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ 2 ಫೋಟೊಗಳನ್ನು ತೋರಿಸಲಾಗಿ ಅದರಲ್ಲಿ ತಾನಿರುವುದಾಗಿ ನೋಡಿ ಗುರುತಿಸಿದ್ದರಿಂದ ಸದರಿ ಫೋಟೊಗಳನ್ನು ನಿಪಿ-8 ಮತ್ತು 9 ಎಂದು ಗುರುತಿಸಲಾಯಿತು.

ದಿನಾಂಕ 11-01-2024 ರಂದು ಪೊಲೀಸ್ ಠಾಣೆಯಲ್ಲಿ ಸದರಿ ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ಪಂಚನಾಮೆ ವಿಚಾರವಾಗಿ ಮಾಡಿರುತ್ತೇನೆ. ಸದರಿ ಪಂಚನಾಮೆ ಮಾಡಿದಾಗ ಸಂಜೆ 5 ರಿಂದ 6 ಗಂಟೆ ಆಗಿತ್ತು. ಪಂಚನಾಮೆ ಮಾಡಿ ಕೆಎ-32 ಎಫ್-0265 ಬಸ್ಸನ್ನು ಜಪ್ತಿಪಡಿಸಿಕೊಂಡಿರುತ್ತಾರೆ. ಅಪಘಾತವಾದ ವಿಚಾರವಾಗಿ ಸದರಿ ಬಸ್ಸನ್ನು ಜಪ್ತಿಪಡಿಸಿಕೊಂಡಿರುತ್ತಾರೆ.

**ಆರೋಪಿ ಪರ ವಕೀಲರು ಗೈರು ಹಾಜರು ಇರುವ ಕಾರಣ ಸಾಕ್ಷಿ ಪಾಟೀ ಸವಾಲನ್ನು ರೂ.200/- ಖರ್ಚಿನೊಂದಿಗೆ ಮುಂದೂಡಲಾಯಿತು.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ